ಜೊಲ್ಲೆ ಉದ್ಯೋಗ ಸಮೂಹ
ವಾರ್ತಾ ಪತ್ರ
(ಖಾಸಗಿ ಸುತ್ತೋಲೆ ಸಲುವಾಗಿ ಮಾತ್ರ)
ಜೂನ್ 2022–ಸಂಪುಟ–6 ಸಂಚಿಕೆ–07

# ದರ್ಪಣ





## ಜೊಲ್ಲೆ ಉದ್ಯೋಗ ಸಮೂಹದ ಅಂಗ ಸಂಸ್ಥೆಗಳ
## ವಾರ್ಷಿಕ ಸರ್ವ ಸಾಧಾರಣ ಸಭೆ

ರವಿವಾರ ದಿನಾಂಕ 15–5–2022ರಂದು ಸಂಜೆ ಯಕ್ಸಂಬಾ ಪಟ್ಟಣದ ಶಿವಶಂಕರ ಜೊಲ್ಲೆ ಪಬ್ಲಿಕ್ (ಸಿಬಿಎಸ್‌ಸಿ) ಶಾಲೆಯ ಆವರಣದಲ್ಲಿ ಆಯೋಜಿಸಲಾದ ಜೊಲ್ಲೆ ಉದ್ಯೋಗ ಸಮೂಹ ಯಕ್ಸಂಬಾದ ಬೀರೇಶ್ವರ ಕೋ–ಆಪ್ ಕ್ರೆಡಿಟ್ ಸೊಸೈಟಿ ಸೇರಿದಂತೆ ಸಹ ಸಂಸ್ಥೆಗಳಾದ ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ, ಜೊಲ್ಲೆ ಎಜ್ಯುಕೇಶನ್ ಸೊಸೈಟಿ, ಯಕ್ಸಂಬಾ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘ, ಲೋಕ ಕಲ್ಯಾಣ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘಗಳ ವಾರ್ಷಿಕ ಸರ್ವ ಸಾಧಾರಣ ಸಭೆ ನಡೆಯಿತು.

ಈ ವಾರ್ಷಿಕ ಸರ್ವಸಾಧಾರಣ ಸಭೆಯನ್ನು ಉದ್ದೇಶಿಸಿ ಜೊಲ್ಲೆ ಉದ್ಯೋಗ ಸಮೂಹ ಸಂಸ್ಥಾಪಕರು ಹಾಗೂ ಚಿಕ್ಕೋಡಿ ಲೋಕಸಭೆ ಸಂಸದರಾದ ಶ್ರೀ. ಅಣ್ಣಾಸಾಹೇಬ ಜೊಲ್ಲೆಯವರು ಮಾತನಾಡುತ್ತ, "ಸಹಕಾರವೆಂದರೆ ಕೇವಲ ಆರ್ಥಿಕ ಚಟುವಟಿಕೆಗಳಿಗೆ ಮಾತ್ರ ಸೀಮಿತವಾಗದೇ ಸಮಾಜ, ಶಿಕ್ಷಣ, ಮಹಿಳಾ ಸಬಲೀಕರಣ ಹಾಗೂ ಇನ್ನಿತರ ವ್ಯವಸ್ಥೆಗಳ ಸಮೃದ್ಧಿಗೆ ಶ್ರಮಿಸುವುದೇ ಸಹಕಾರ ರಂಗದ ಮೂಲ ಉದ್ದೇಶವಾಗಿದ್ದು, ರಾಷ್ಟ್ರೀಕೃತ ಬ್ಯಾಂಕುಗಳಿಗೆ ಪೈಪೋಟಿ ನೀಡಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಗ್ರಾಮೀಣ ಭಾಗದ ಸಮಸ್ಯೆಗಳಿಗೆ ಜಾಗತಿಕ ಮಟ್ಟದಲ್ಲಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಜೊಲ್ಲೆ ಸಮೂಹ ಕಾರ್ಯೋನ್ಮುಖವಾಗಿದ್ದು, ಸಂಸ್ಥೆಗಳ ಪ್ರಗತಿಯಿಂದ ಉದ್ಯೋಗಿಗಳು, ಗ್ರಾಹಕರಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದರು. ನೆರೆ ರಾಜ್ಯವಾದ ಗೋವಾದಲ್ಲಿ ಶೀಘ್ರದಲ್ಲಿ ಬೀರೇಶ್ವರ ಕೋ. ಆಪ್. ಕ್ರೆಡಿಟ ಸೋಸಾಯಟಿ ಶಾಖೆಗಳನ್ನು ಪ್ರಾರಂಭಿಸಲು ಅನುಮತಿ ದೊರಯಲಿದ್ದು, ಬರುವ ವರ್ಷದಲ್ಲಿ ಶಾಖೆಗಳನ್ನು ಪ್ರಾರಂಭಿಸಲಾಗುವುದು ಅದು ಅಲ್ಲದೇ ಆರ್ಥಿಕವಾಗಿ ಹಿಂದುಳಿದ ಸದಸ್ಯರ ಮಕ್ಕಳ ಉನ್ನತ ಶಿಕ್ಷಣಕ್ಕಾಗಿ ಆರ್ಥಿಕ ಸೌಲಭ್ಯ ಕಲ್ಪಿಸಲಾಗುವುದು" ಎಂದು ಹೇಳಿದರು.

ಜೊಲ್ಲೆ ಉದ್ಯೋಗ ಸಮೂಹದ ಅಧಕ್ಷರು, ಹಾಗೂ ಮುಜರಾಯಿ ಹಜ್ ಹಾಗೂ ವಕ್ಫ್ ಇಲಾಖೆಯ ಸಚಿವೆ ಸೌ. ಶಶಿಕಲಾ ಜೊಲ್ಲೆಯವರು

### ಶ್ರೀ ಬೀರೇಶ್ವರ ಕೋ-ಆಪ್. ಕ್ರೆಡಿಟ್ ಸೊಸಾಯಟಿ ಲಿ., ಯಕ್ಸಂಬಾ (ಮಲ್ಟಿ-ಸ್ಟೇಟ)




ಮಾತನಾಡಿ, "ದೂರದೃಷ್ಟಿಯ ಯೋಜನೆಗಳು ಸಮಾಜಕ್ಕೆ ಬಹುದೊಡ್ಡ ಅನುಕೂಲ ಒದಗಿಸಬಲ್ಲವು ಎಂಬುದಕ್ಕೆ ಶ್ರೀ ಬೀರೇಶ್ವರ ಸಹಕಾರಿ ಸೇರಿದಂತೆ ಸಮೂಹದ ಎಲ್ಲ ಸಂಸ್ಥೆಗಳು ಉತ್ತಮ ನಿದರ್ಶನವಾಗಿವೆ. ಸಹಕಾರ ರಂಗದ ಸರ್ವತೋಮುಖ ವಿಕಾಸಕ್ಕಾಗಿ ಜಾಗತಿಕ ಮಟ್ಟದ ಬೆಳವಣಿಗೆಗಳತ್ತ ಗಮನ ಹರಿಸಬೇಕಾಗಿದೆ" ಎಂದರು.

ಬಸವಜ್ಯೋತಿ ಯೂಥ್ ಫೌಂಡೇಶನ್ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆಯವರು ಮಾತನಾಡಿ, "ನಮ್ಮ ಜೊಲ್ಲೆ ಉದ್ಯೋಗ ಸಮೂಹ ಇಂದು ಹೆಮ್ಮರವಾಗಿ ಬೆಳೆದು ನಿಂತಿದೆ. ಗ್ರಾಮೀಣ ಭಾಗದ ಜನರ ಉದ್ಧಾರವೇ ನಮ್ಮ ಸಂಸ್ಥೆಯ ಮೂಲ ಉದ್ದೇಶವಾಗಿದ್ದು, ಜನಸಾಮಾನ್ಯರ ಶ್ರೇಯೋಭಿವೃದ್ಧಿಗೆ ವಿವಿಧ ಯೋಜನೆಗಳನ್ನು ಹಾಕಿಕೊಂಡು ಜನಮಾನಸದಲ್ಲಿ ಉಳಿಯುವುದೇ ನಮ್ಮ ಮೂಲ ಧ್ಯೇಯವಾಗಿದೆ" ಎಂದರು.

ಸಮಾರಂಭದಲ್ಲಿ ಜೊಲ್ಲೆ ಉದ್ಯೋಗ ಸಮೂಹ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳ, ಆಡಳಿತ ಮಂಡಳಿ, ಸಲಹಾ ಸಮಿತಿ ಸದಸ್ಯರ ವಾರಸುದಾರರಿಗೆ ಪರಿಹಾರ ಚೆಕ್ ಹಾಗೂ ಅತ್ಯುತ್ತಮ ಶಾಖೆಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆಯ ನಿರ್ದೇಶಕ ಶ್ರೀ. ಅಪ್ಪಾಸಾಹೇಬ ಜೊಲ್ಲೆ, ಆಶಾಜ್ಯೋತಿ ವಿಶೇಷ ಚೇತನ ಮಕ್ಕಳ ಶಾಲೆಯ ಅಧ್ಯಕ್ಷರಾದ ಕು. ಜ್ಯೋತಿಪ್ರಸಾದ ಜೊಲ್ಲೆ, ಶ್ರೀ. ಸಿದ್ರಾಮ ಗಡದೆ, ಶ್ರೀ. ಅನ್ವರ ದಾಡಿವಾಲೆ, ಶ್ರೀ. ಚಂದ್ರಕಾಂತ ಖೋತ, ಶ್ರೀ. ಲಕ್ಷ್ಮಣ ಕಬಾಡೆ, ಶ್ರೀ. ಬಿ.ಎ. ಮಾಳಿ, ಸಿಇಓ ಡಾ. ವಿವೇಕಾನಂದ ಬಂಕೊಳ್ಳಿ, ವಿವಿಧ ಅಂಗ ಸಂಸ್ಥೆಗಳ ಪದಾಧಿಕಾರಿಗಳು, ಮುಖ್ಯಸ್ಥರು, ಸಲಹಾ ಸಮಿತಿ ಸದಸ್ಯರು, ಗ್ರಾಮಸ್ಥರು ಹಾಗೂ ವಿವಿಧ ಶಾಖೆಗಳ ಸದಸ್ಯರು ಉಪಸ್ಥಿತರಿದ್ದರು.

ಬಸವಜ್ಯೋತಿ ಯುಥ್ ಪೌಂಡೇಶನ್ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ. ಎ. ಗುರವ ನಿರೂಪಿಸಿದರು.

ಪ್ರೋ. ಬಾಬಾಸಾಹೇಬ ಆರ್. ಕಾಮನಗೋಳ
ಸಹ ಪ್ರಾಧ್ಯಾಪಕರು
ಡಾ॥ ಬಾಬಾಸಾಹೇಬ ಅಂಬೇಡ್ಕರ (ಬಿ.ಇಡಿ.)
ಶಿಕ್ಷಣ ಮಹಾವಿದ್ಯಾಲಯ, ನಣದಿ







**ಶಿವಶಂಕರ ಜೊಲ್ಲೆ ಕನ್ನಡ ಪ್ರೌಢ ಶಾಲೆಯ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಸಾಧನೆ ಗೈದ ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕ ವೃಂದದವರಿಗೆ**

# ಅಭಿನಂದನಾ ಸಮಾರಂಭ

ಜೊಲ್ಲೆ ಎಜ್ಯುಕೇಶನ್ ಸೊಸಾಯಟಿಯ ಅಂಗಸಂಸ್ಥೆಯಾದ ಶಿವಶಂಕರ ಜೊಲ್ಲೆ ಕನ್ನಡ ಪ್ರೌಢ ಶಾಲೆಯ ಸನ್ 2021-22 ನೇ ಸಾಲಿನ ಎಸ್.ಎಸ್.ಎಲ್.ಸಿ. ವಾರ್ಷಿಕ ಫಲಿತಾಂಶವು ಶೇ. 100 ರಷ್ಟಾಗಿದ್ದು, ಒಟ್ಟು 50 ವಿದ್ಯಾರ್ಥಿಗಳಲ್ಲಿ 29 ಅತ್ಯುನ್ನತ ಶ್ರೇಣಿ ಹಾಗೂ 21 ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗುವುದರೊಂದಿಗೆ ಕು. ಶ್ರೇಯಾ ನಿರಂಜನ ಪಾಟೀಲ 625/624 ಅಂಕಗಳನ್ನು ಪಡೆದು ರಾಜ್ಯಕ್ಕೆ ದ್ವಿತೀಯ ಸ್ಥಾನ, ಕು. ಸಂಚಿತಾ ಮಹೇಶ ಖೋತ 625/621 ಅಂಕಗಳನ್ನು ಪಡೆದು ರಾಜ್ಯಕ್ಕೆ ಐದನೇ ಸ್ಥಾನ, ಕು. ಕೌಸಲ್ಯಾ ಶ್ರೀಮಂತ ಚೌಗಲೆ 625/612 ಅಂಕಗಳನ್ನು ಪಡೆದು ಶಾಲೆಗೆ ತೃತೀಯ ಸ್ಥಾನ ಪಡೆದಿದ್ದಾರೆ.

ರಾಜ್ಯಮಟ್ಟದಲ್ಲಿ ರ್‍ಯಾಂಕ್ ಪಡೆದ ಈ ವಿದ್ಯಾರ್ಥಿಗಳನ್ನು ಅಭಿನಂದಿಸಲು ಸಂಸ್ಥೆಯು ಬಿರೇಶ್ವರ ಸಹಕಾರಿ ಸಭಾಗ್ರಹದಲ್ಲಿ ಅಭಿನಂದನಾ ಸಮಾರಂಭವನ್ನು ಏರ್ಪಡಿಸಿತ್ತು. ಈ ಸಮಾರಂಭದ ಅಧ್ಯಕ್ಷತೆಯನ್ನು ಜೊಲ್ಲೆ ಉದ್ಯೋಗ ಸಮೂಹದ ಸಿ.ಇ.ಓ ಯವರಾದ ಡಾ. ವಿವೇಕಾನಂದ ಬಂಕೊಳ್ಳಿ ವಹಿಸಿಕೊಂಡು, "ಭವ್ಯ ಭವಿಷ್ಯತ್ತಿನಲ್ಲಿ ವಿದ್ಯಾರ್ಥಿಗಳು ನಕ್ಷತ್ರಗಳಂತೆ ಹೊಳೆಯಲು ತಮ್ಮ ಪರಿಶ್ರಮದ ಜೊತೆಗೆ ಪಾಲಕರ ಹಾಗೂ ಶಿಕ್ಷಕರ ಮಾರ್ಗದರ್ಶನದಲ್ಲಿ ಶಿಕ್ಷಣ ಪಡೆಯುವುದು ಅವಶ್ಯಕ, ಪ್ರತಿಯೊಬ್ಬ ಗ್ರಾಮೀಣ ವಿದ್ಯಾರ್ಥಿಯು ಸೃಜನಶೀಲತೆಯೊಂದಿಗೆ, ಜಾಗತೀಕ ಮಟ್ಟದಲ್ಲಿ ತನ್ನ ಪ್ರತಿಭೆಯನ್ನು ಪ್ರದರ್ಶಿಸಲು ಮುಂದಾಗಬೇಕೆಂದು" ಮಾತನಾಡಿದರು.

ತಾಲೂಕಿನ ಬೀರೇಶ್ವರ ಕೋ. ಆಫ್ ಕ್ರೆಡಿಟ್ ಸೊಸಾಯಟಿ ಲಿ. (ಮಲ್ಟಿಸ್ಟೇಟ್) ಯಕ್ಸಂಬಾದ ಪ್ರಧಾನ ವ್ಯವಸ್ಥಾಪಕರಾದ ಆರ್. ಸಿ. ಚೌಗಲಾ, ಕಾರ್ಯಕ್ರಮ ಉದ್ದೇಶಿಸಿ "ನಮ್ಮ ಶಾಲೆಯು ಗ್ರಾಮೀಣ ಪ್ರದೇಶದಲ್ಲಿದ್ದರು ಒಳ್ಳೆಯ ಸೌಲಭ್ಯಗಳೊಂದಿಗೆ ಗುಣಾತ್ಮಕ ಶಿಕ್ಷಣ ನೀಡಿ ರಾಜ್ಯ ಮಟ್ಟದಲ್ಲಿ ಉತ್ತಮ ಫಲಿತಾಂಶ ನೀಡಿರುವುದು ಸಂತಸತಂದಿದೆ. ಹೀಗೆ ಮುಂದಿನ ವರ್ಷದ ಫಲಿತಾಂಶವು ಬರಲಿ" ಎಂದು ಶುಭಹಾರೈಸಿದರು.

ಪಾಲಕರಾದ ಶ್ರೀ, ನಿರಂಜನ ಪಾಟೀಲ ರವರು ಮಾತನಾಡಿ ನಮ್ಮ ಮಗಳು ಇಂತಹ ಸಾಧನೆ ಮಾಡಲು ಸಂಸ್ಥೆಯ ಸಂಸ್ಥಾಪಕರು, ಚಿಕ್ಕೋಡಿ ಸಂಸದರಾದ, ಶ್ರೀ ಅಣ್ಣಾಸಾಹೇಬ ಶಂಕರ ಜೊಲ್ಲೆ, ಹಾಗೂ ಸಂಸ್ಥೆಯ ಅಧ್ಯಕ್ಷರು ಹಾಗೂ ಕರ್ನಾಟಕ ಸರ್ಕಾರದ ಮುಜರಾಯಿ ಹಜ್ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ, ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ, ಇವರು ಒದಗಿಸಿಕೊಟ್ಟ ಮೂಲಭೂತ ಸೌಕರ್ಯಗಳು ಹಾಗೂ ಶಾಲೆಯ ಎಲ್ಲ ಶಿಕ್ಷಕರ ಒಳ್ಳೆಯ ಮಾರ್ಗದರ್ಶನ, ಶಾಲೆಯಲ್ಲಿ ಒಳ್ಳೆಯ ಫಲಿತಾಂಶಕ್ಕಾಗಿ ಹಾಕಿಕೊಂಡ ಯೋಜನೆಗಳು ಸಹಕಾರಿಯಾದವು ಈ ಶಾಲೆಗೆ ನಾವು ಸದಾ ಚಿರಋಣಿಯಾಗಿರುತ್ತೇವೆ" ಎಂದು ವ್ಯಕ್ತಪಡಿಸಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ, ವ್ಹಿ. ಆರ್. ಭಿವಸೆರವರು ಎಲ್ಲರನ್ನು ಸ್ವಾಗತಿಸಿ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್. ಜಿ. ಕಾಮತ, ವಿದ್ಯಾರ್ಥಿಗಳ ಪಾಲಕರು, ಶಾಲೆಯ ಶಿಕ್ಷಕವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸಹ ಶಿಕ್ಷಕಿಯಾದ ಆರ್. ಎಂ. ಹಿರೇಮಠ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.


## 2021-22 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ

## ಹಾರ್ದಿಕ ಅಭಿನಂದನೆಗಳು



ಶ್ರೇಯಾ ಪಾಟೀಲ
ರಾಜ್ಯಕ್ಕೆ ದ್ವಿತೀಯ ಸ್ಥಾನ
99.84%

| | | | | | | |
|---|---|---|---|---|---|---|
| ಸಂಚೀತಾ ಖೋತ 99.36% | ಕೌಸಲ್ಯಾ ಚೌಗಲೆ 97.92% | ಮಂಜುನಾಥ ಬಾಳಿಕಾಯಿ 97.12% | ಪುಂಡಲೀಕ ಗಿಡ್ಡ 95.84% | ಸಂಕೇತ ಚಂದೂರೆ 95.52% | ವಿದ್ಯಾ ಖೋತ 94.56% | ರಕ್ಷಿತಾ ಜಕ್ಕನ್ನವರ 94.24% |
| ಯುವರಾಜ ಶೇಖದಾರ 93.76% | ಅರ್ಪಿತಾ ಗೌಂಡಿ 93.28% | ಕವಿತಾ ನೇಜಿಮಾಳಿ 92.48% | ಸುನೀಲಕುಮಾರ ದಾನವಾಡೆ 92.48% | ಪ್ರಜ್ವಲ ಕೋಳಿ 92.16% | ಅಲ್ಫಿಯಾ ಮುಲ್ಲಾ 91.68% | ದ್ರಾಕ್ಷಾಯಣಿ ಖೋತ 91.52% |
| ಅಲ್ಕಾ ಮಾರಾಪೂರೆ 91.20% | ಸುಧೀರ ಸಾಂಗಾವೆ 90.40% | ಓಂಕಾರ ಚೌಗಲೆ 89.76% | ಸುಹಾನಿ ಮಾಳಿ 89.60% | ನಿರಂಜನ ಬಾವಚೆ 89.44% | ಸ್ವಪ್ನಾ ಸಂಕಪಾಳ 89.28% | ರೋಹಣ ಇಂಗಳೆ 89.12% |
| ವಿವೇಕ ಚೌಗಲೆ 88.96% | ಅಸ್ಮೀತಾ ಹವಾಲ್ದಾರ 87.84% | ಸಂತೋಷ ಹಲಕಾಟೆ 87.52% | ಪ್ರಥಮೇಶ ಜಿನಗರ 86.72% | ಶಿಲ್ಪಾ ಕಲ್ಯಾಣೆ 86.40% | ಋಷಿಕೇಷ ಸಾತ್ವರ 86.24% | ಆದಿಲಷಾ ಮಕಾನದಾರ 85.28% |

**ವಿಷಯವಾರು 100 ಕ್ಕೆ 100 ಅಂಕ ಪಡೆದ ವಿದ್ಯಾರ್ಥಿಗಳು**

ಹಿಂದಿ - 24 | ಸ. ವಿಜ್ಞಾನ - 17 | ಕನ್ನಡ - 07 | ಇಂಗ್ಲೀಷ - 01 | ಗಣಿತ - 01.

**Obtained Grade A**

- ಪ್ರವೇಶಗಳು ಪ್ರಾರಂಭ : 2022-23 ನೇ ಸಾಲಿಗಾಗಿ ನರ್ಸರಿಯಿಂದ 10ನೇ ತರಗತಿಯವರೆಗೆ
- ವಸತಿ ಸೌಲಭ್ಯ : 4ನೇ ತರಗತಿಯಿಂದ 10ನೇ ತರಗತಿಯವರೆಗೆ

ಇಂದೇ ತ್ವರೆ ಮಾಡಿ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9900553966, 9900795802

# ಮೇ 1 ಕಾರ್ಮಿಕರ ದಿನದ ಇತಿಹಾಸ ಮತ್ತು ಮಹತ್ವ

ಪ್ರತಿ ವರ್ಷ ಮೇ 1 ರಂದು ಅಂತರರಾಷ್ಟ್ರೀಯ ಕಾರ್ಮಿಕ ದಿನ, ಲೇಬರ್ಸ್ ಡೇ ಮತ್ತು ಮೇ ದಿನವೆಂದು ಆಚರಿಸಲಾಗುತ್ತದೆ. ಕಾರ್ಮಿಕರ ಶ್ರಮವನ್ನು ಗೌರವಿಸುವ ಸಲುವಾಗಿ ಈ ದಿನವು ಮೀಸಲಾಗಿದೆ. ಈ ದಿನವನ್ನು ವಿವಿಧ ದೇಶಗಳಲ್ಲಿ ಅಧಿಕೃತ ಸಾರ್ವಜನಿಕ ರಜಾ ದಿನವನ್ನಾಗಿ ಮಾಡಲಾಗಿದೆ. ಕ್ಯೂಬಾ, ಚೀನಾ, ಭಾರತ ಹಾಗೂ ಇತರ ದೇಶಗಳಲ್ಲಿ ಈ ದಿನವನ್ನು ಆಚರಿಸಲಾಗುತ್ತದೆ.

ಹಾಗಾದ್ರೆ ಅಂತರರಾಷ್ಟ್ರೀಯ ಕಾರ್ಮಿಕ ದಿನ, ಲೇಬರ್ಸ್ ಡೇ, ವಿಶ್ವ ಕಾರ್ಮಿಕರ ದಿನ ಮತ್ತು ಮೇ ದಿನ ಎಂದೆಲ್ಲಾ ಕರೆಯಲಾಗುವ ಈ ದಿನದ ಇತಿಹಾಸ ಏನು, ಅದರ ಮಹತ್ವಗಳೇನು? ಈ ದಿನವನ್ನು ಏಕೆ ಆಚರಿಸಲಾಗುತ್ತದೆ ಎನ್ನುವುದನ್ನು ನೋಡೋಣ.

**ವಿಶ್ವ ಕಾರ್ಮಿಕರ ದಿನದ ಇತಿಹಾಸ ಮತ್ತು ಮಹತ್ವ:**

ದಿನದ 15 ಗಂಟೆಗಳ ಕೆಲಸದ ಸಮಯವನ್ನು 8 ಗಂಟೆಗಳ ಅವಧಿಗೆ ತರಬೇಕು ಎಂಬ ಬೇಡಿಕೆಯನ್ನು ಮುಂದಿಟ್ಟುಕೊಂಡು ಕಾರ್ಮಿಕರು ಅಮೇರಿಕದ ಚಿಕಾಗೋ ನಗರದಲ್ಲಿ ಮೇ 1, 1886 ರಂದು ಸಹಸ್ರಾರು ಸಂಖ್ಯೆಯಲ್ಲಿ ಹೋರಾಟ ಮಾಡುತ್ತಿದ್ದರು. ಹೋರಾಟವು ತೀವ್ರ ಸ್ವರೂಪ ಪಡೆದಿದ್ದರಿಂದ ಇದನ್ನು ಹತ್ತಿಕ್ಕುವದಕ್ಕಾಗಿ ಮೇ 4ರಂದು ಪೋಲಿಸರು ಕಾರ್ಮಿಕರ ಮೇಲೆ ಗುಂಡಿನ ದಾಳಿ ನಡೆಸಿದರು.ಇದರ ಫಲವಾಗಿ ಅಂದರೆ 1916 ರ ಇಸವಿಯಲ್ಲಿ ಅಮೇರಿಕ ಸರ್ಕಾರ 8 ಗಂಟೆಗಳ ಕೆಲಸದ ಸಮಯವನ್ನು ಆದೇಶ ಮಾಡಿತು.

ಆದರೆ ಭಾರತದಲ್ಲಿ 1923 ನೇ ಇಸವಿಯ ಮೇ 1 ರಂದು "ಲೇಬರ್ ಕಿಸಾನ್ ಪಾರ್ಟಿ ಆಫ್ ಹಿಂದುಸ್ತಾನ್" ಸ್ಥಾಪನೆಗೊಂಡ ದಿನದಿಂದ ಕಾರ್ಮಿಕರ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತದೆ. ಆ ಸಮಯದಲ್ಲಿ ಇದನ್ನು 'ಮದ್ರಾಸ್ ಡೆ' ಎಂದು ಕರೆಯಲಾಗುತ್ತಿತ್ತು. ಕಾರ್ಮಿಕರ ದಿನಾಚರಣೆಯ ದಿನದಂದು ರಾಷ್ಟ್ರೀಯ ರಜಾ ದಿನವನ್ನಾಗಿ ಘೋಷಣೆ ಮಾಡಬೇಕೆಂದು ಮತ್ತು ಕಾರ್ಮಿಕರಿಗೆ ಅಂದಿನ ದಿನ ರಜೆ ನೀಡಬೇಕೆಂದು ಸದನದಲ್ಲಿ ಮಸೂದೆ ಮಂಡಿಸಲಾಯಿತು. ಅಂದಿನಿಂದ ಇಂದಿನವರೆಗೂ ಪ್ರತಿ ವರ್ಷ ಮೇ 1 ರಂದು ಕಾರ್ಮಿಕರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ವಿವಿಧ ರಾಷ್ಟ್ರಗಳಲ್ಲಿ ವಿವಿಧ ದಿನಗಳಲ್ಲಿಯೂ ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ.

**ಅಂತರರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಥೀಮ್ ಏನು?:**


ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆಯನ್ನು ಕಾರ್ಮಿಕರಿಗೆ ಗೌರವ ಸಲ್ಲಿಸುವ ಸೂಚಕವಾಗಿ ಆಚರಿಸಲಾಗುತ್ತದೆ. ಪ್ರತಿ ಬಾರಿಯೂ ವಿಶೇಷ ಥೀಮ್ ನೊಂದಿಗೆ ಈ ದಿನವನ್ನು ಆಚರಿಸಲಾಗುತ್ತದೆ. ಈ ಬಾರಿ "ಸಕಾರಾತ್ಮಕ ಸುರಕ್ಷತೆ ಮತ್ತು ಆರೋಗ್ಯ ಸಂಸ್ಕೃತಿಯನ್ನು ನಿರ್ಮಿಸಲು ಒಟ್ಟಾಗಿ ಕಾರ್ಯನಿರ್ವಹಿಸಿ" ಇದು 2022ರ ವಿಶ್ವ ಕಾರ್ಮಿಕರ ದಿನದ ಥೀಮ್ ಆಗಿದೆ.

**ಏಕೆ ಆಚರಿಸಲಾಗುತ್ತದೆ?:**

ಪ್ರಪಂಚದಾದ್ಯಂತದ ಕಾರ್ಮಿಕರಿಗೆ ಸಮಾನತೆ ಮತ್ತು ನ್ಯಾಯವನ್ನು ಒದಗಿಸಲು ನಡೆದ ಐತಿಹಾಸಿಕ ತ್ಯಾಗ ಮತ್ತು ಹೋರಾಟವನ್ನು ನೆನಪಿಸಲು ಅಂತರರಾಷ್ಟ್ರೀಯ ಕಾರ್ಮಿಕ ದಿನಾಚರಣೆಯನ್ನು ಆಚರಿಸಲಾಗುತ್ತದೆ.

ಈ ದಿನವನ್ನು ಕಾರ್ಮಿಕ ಸಮುದಾಯಗಳ ಕೊಡುಗೆಗೆ ಸ್ಪಂದಿಸುವ ಜೊತೆಗೆ ಇನ್ನಷ್ಟು ಉದ್ಯೋಗಾವಕಾಶ ಸೃಷ್ಟಿಸಲು, ಕೆಲಸದ ಪರಿಸ್ಥಿತಿಗಳನ್ನು ಸುಧಾರಿಸಲು, ಸಾಮಾಜಿಕ ರಕ್ಷಣೆಯನ್ನು ನೀಡಲು ಮತ್ತು ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಲು ಸಹಾಯ ಮಾಡುವ ಉದ್ದೇಶದಿಂದಲೂ ಆಚರಣೆಯನ್ನು ಮಾಡಲಾಗುತ್ತದೆ.

## ಶ್ರೀ ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ನಿ., ಯಕ್ಸಂಬಾ








ಶ್ರೀ ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ಲಿ., ಯಕ್ಸಂಬಾದ ನಿವ್ವಳ ಲಾಭದ ಕುರಿತು ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಬಸವಜ್ಯೋತಿ ಯೂಥ್ ಫೌಂಡೇಶನ ಅಧ್ಯಕ್ಷರಾದ ಕು. ಬಸವಪ್ರಸಾದ ಜೊಲ್ಲೆ ಯವರು ಭಾಗವಹಿಸಿ ಮಾತನಾಡುತ್ತಿರುವುದು.




ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ ಕ್ರೀಡಾ ಭಾರತಿ ವತಿಯಿಂದ ಆಯೋಜಿಸಿದ್ದ, ಸಂಪೂರ್ಣ ಭಾರತ ಪ್ರದಕ್ಷಿಣೆ ಸದಸ್ಯರ ಸ್ವಾಗತ ಸಮಾರಂಭದಲ್ಲಿ ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಹಾಗೂ ಚಿಕ್ಕೋಡಿ ಲೋಕಸಭೆ ಸಂಸದರಾದ ಶ್ರೀ ಅಣ್ಣಾಸಾಹೇಬ ಜೊಲ್ಲೆ ಯವರು ಭಾಗವಹಿಸಿ, ಸದಸ್ಯರನ್ನು ಸತ್ಕರಿಸುತ್ತಿರುವುದು.





ಅಕ್ಕೋಳ ಗ್ರಾಮದ ಶ್ರೀ 1008 ಪಾರ್ಶ್ವನಾಥ ದಿಗಂಬರ ಜೈನ ಮಂದಿರ ಜೀರ್ಣೋದ್ದಾರಕ್ಕೆ 10 ಲಕ್ಷ ರೂ. ಅನುದಾನ ಆದೇಶ ಪತ್ರವನ್ನು ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಹಾಗೂ ಚಿಕ್ಕೋಡಿ ಲೋಕಸಭೆ ಸಂಸದರಾದ ಶ್ರೀ ಅಣ್ಣಾಸಾಹೇಬ ಜೊಲ್ಲೆಯವರು ಮಂದಿರದ ಕಮೀಟಿ ಸದಸ್ಯರಿಗೆ ಹಸ್ತಾಂತರಿಸಿದರು.





ಭಿವಶಿ ಗ್ರಾಮದಲ್ಲಿ, ಶ್ರೀ ಥಳೋಬಾ ಮಂದಿರದ ಜಾತ್ರೆಯ ನಿಮಿತ್ತ ದೇವಸ್ಥಾನಕ್ಕೆ ಜೊಲ್ಲೆ ದಂಪತಿ ಭೇಟಿ ನೀಡಿ, ಥಳೋಬಾ ಪಲ್ಲಕ್ಕಿ ಮೆರಣಿಗೆಗೆ ಚಾಲನೆ ನೀಡುತ್ತಿರುವುದು.





ಕುರ್ಲಿ ಗ್ರಾಮದಲ್ಲಿ ಶ್ರೀ ವಿಠ್ಠಲ ರುಕ್ಮಿಣಿ ವಾರಕರಿ ಸೇವಾ ಮಂಡಳ ಹಾಗೂ ಸೌ.ರಾಜಶ್ರೀ ನಿಕಾಡೆ ಆಯೋಜಿಸಿದ ಬಾಲವಿಕಾಸ ಸಂಸ್ಕಾರ ಶಿಬಿರ ಕಾರ್ಯಕ್ರಮದಲ್ಲಿ ಜೊಲ್ಲೆ ದಂಪತಿ ಭಾಗವಹಿಸಿದ ದೃಶ್ಯ.





ನಾಯಿಂಗ್ಲಜ ಗ್ರಾಮದಲ್ಲಿ, ಶ್ರೀ ಅಷ್ಟವಿನಾಯಕ ದೇವಸ್ಥಾನದ ನೂತನ ಮಂದಿರದ ವಾಸ್ತು ಶಾಂತಿ ಹಾಗೂ ಅಷ್ಟವಿನಾಯಕ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆಯವರನ್ನು ಸತ್ಕರಿಸುತ್ತಿರಿವುದು.




ರಾಮದುರ್ಗ ನಗರದಲ್ಲಿ, ಶ್ರೀನಿವಾಸ ಕಲ್ಯಾಣ ಮಹೋತ್ಸವದಲ್ಲಿ ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಯವರು ಭಾಗವಹಿಸಿ, ದ್ವಿಪ ಪ್ರಜ್ವಲನೆ ಮಾಡಿ, ಕಾರ್ಯಕ್ರಮಕ್ಕೆ ಚಾಲನೆ ನೀಡುತ್ತಿರುವುದು.





ಹುಕ್ಕೇರಿ ತಾಲೂಕಿನ ಬಡಕುಂದ್ರಿ ಗ್ರಾಮದ ಸುಕ್ಷೇತ್ರ ಶ್ರೀ ಹೊಳೆಮ್ಮಾದೇವಿ ದೇವಸ್ಥಾನಕ್ಕೆ ಆಶಾಜ್ಯೋತಿ ವಿಶೇಷ ಮಕ್ಕಳ ಶಾಲೆಯ ಅಧ್ಯಕ್ಷರಾದ ಕು. ಜ್ಯೋತಿಪ್ರಸಾದ ಜೊಲ್ಲೆ ಯವರು ಭೇಟಿ ನೀಡಿ ಹೊಳೆಮ್ಮಾದೇವಿ ದೇವಸ್ಥಾನದ ರಾಜಗೋಪುರ ಕಳಸಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಸತ್ಕಾರ ಸ್ವೀಕರಿಸುತ್ತಿರುವುದು.




ಚಾಂದ ಶಿರದವಾಡ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಮಂಜೂರಾದ 1 ಕೋಟಿ 50 ಲಕ್ಷ ರೂ. ಮೊತ್ತದಲ್ಲಿ ರಸ್ತೆ ಸುಧಾರಣಾ ಮಾಡುವ ಕಾಮಗಾರಿಗೆ ಕರ್ನಾಟಕ ರಾಜ್ಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಯವರು ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.




ಬೆಣ್ಣಿಹಳ್ಳಿ ಗ್ರಾಮದಲ್ಲಿ, ಶ್ರೀ ಬಸವಣ್ಣ ರೈತರ ಉತ್ಪಾದಕ ಕಂಪನಿ ಲಿ. ಇದರ ಕಾರ್ಯಾಲಯ ಮತ್ತು ನೂತನ ಮಾರಾಟ ಮಳಿಗೆಯನ್ನು ಮುಜರಾಯಿ, ಹಜ ಮತ್ತು ವಕ್ಫ್ ಇಲಾಖೆಯ ಸಚಿವರಾದ ಸೌ. ಶಶಿಕಲಾ ಜೊಲ್ಲೆ ಹಾಗೂ ಚಿಕ್ಕೋಡಿ ಲೋಕಸಭೆ ಸಂಸದರಾದ ಶ್ರೀ ಅಣ್ಣಾಸಾಹೇಬ ಜೊಲ್ಲೆ ಯವರು ಉದ್ಘಾಟಿಸುತ್ತಿರುವುದು.




ನಿಪ್ಪಾಣಿ ಮತಕ್ಷೇತ್ರದ ಗಜಬರವಾಡಿ ಗ್ರಾಮದ ಶ್ರೀ ನರಸಿಂಹ ಮಂದಿರಕ್ಕೆ ಜೊಲ್ಲೆ ದಂಪತಿ ಭೇಟಿ ನೀಡಿ, ಶ್ರೀ ನರಸಿಂಹ ಜಯಂತಿ ಪ್ರಯುಕ್ತ ಅಖಂಡ ಹರಿನಾಮ ಸಪ್ತಾಹ ಮತ್ತು ಗ್ರಂಥರಾಜ ಜ್ಞಾನೇಶ್ವರಿ ಮಾವುಲಿ ಪಾರಾಯಣ ಸಮಾರಂಭದಲ್ಲಿ ಭಾಗವಹಿಸಿದ ದೃಶ್ಯ.


ಜೊಲ್ಲೆ ಉದ್ಯೋಗ ಸಮೂಹ ರಾಣಿ ಚನ್ನಮ್ಮಾ ವೃತ್ತ, ಯಕ್ಸಂಬಾ ತಾ. ಚಿಕ್ಕೋಡಿ ಜಿ. ಬೆಳಗಾವಿ– 591244 Ph : 9844469288 / 7760983792 E-mail : darpanjus6@gmail.com

ಪ್ರಧಾನ ಸಂಪಾದಕರು :– ಸೌ. ಸುಧಾ ಡಿ. ಪಾಟೀಲ, ಉಪನ್ಯಾಸಕರು, ಕನ್ನಡ ವಿಭಾಗ